# ಜಿಲ್ಲಾ ಪಂಚಾಯತ್, ದಾವಣಗೆರೆ

ಲೋಕಿಕೆರೆ ರಸ್ತೆ, ದೂರದರ್ಶನ ಕೇಂದ್ರದ ಎದುರು, ದಾವಣಗೆರೆ
**ದೂರವಾಣಿ ಸಂಖ್ಯೆ:** 08192-261485, 261825, 260016
Email ID: zpdvg@yahoo.co.in Website : www.zpdavangere.kar.nic.in

ಸಂಖ್ಯೆ:ಜಿಪಂದಾ:ಆ(29):ಗ್ರಾ.ಮೇ.ಹು.ನೇ:ಸಿಆರ್-02/2024-25 ದಿನಾಂಕ:27-06-2024

## ನೇಮಕಾತಿ ಅಧಿಸೂಚನೆ

**ವಿಷಯ:** ದಾವಣಗೆರೆ ಜಿಲ್ಲಾ ವ್ಯಾಪ್ತಿಯ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಮೇಲ್ವಿಚಾರಕರ 16 ಖಾಲಿ ಹುದ್ದೆಗಳಿಗೆ ನೇಮಕಾತಿ ಮಾಡುವ ಕುರಿತು.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ:RDPR 156 GPA 2022 (ಇ) ದಿ:14-11-2022.
2. ಸರ್ಕಾರದ ಆದೇಶ ಸಂಖ್ಯೆ: ಕೆಪಿಆರ್‌ಸಿ-DEV/544/2021 ದಿ:19-12-2022.
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸಹಿಮ 2022, ಬೆಂಗಳೂರು ದಿನಾಂಕ: 28-12-2022.
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸಹಿಮ 2023 ದಿ:08-03-2023.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ದಿನಾಂಕ:23-02-2024.

*-*-*-*-*-*-*

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು–2022 ನ್ನು ಉಲ್ಲೇಖ(1)ರಲ್ಲಿ ಜಾರಿಗೊಳಿಸಲಾಗಿದೆ. ಉಲ್ಲೇಖ(1)ರ ಅಧಿಸೂಚನೆಯಲ್ಲಿರುವಂತೆ ಜಾರಿಯಲ್ಲಿರುವ ನಿಯಮಗಳಡಿಯಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಖಾಲಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ನಿರ್ದೇಶನ ನೀಡಲಾಗಿದೆ.

ದಾವಣಗೆರೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ 206 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಸದರಿ ಗ್ರಾಮ ಪಂಚಾಯತಿ ಗ್ರಂಥಾಲಯಗಳಿಗೆ ಪ್ರಸ್ತುತ ಖಾಲಿ ಇರುವ ಒಟ್ಟು 16 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ವೆಬ್‌ಸೆಟ್ **davanagere.nic.in** ಆನ್‌ಲೈನ್ ಮೂಲಕ ಅರ್ಜಿಯನ್ನು ದೃಢೀಕರಿಸಿದ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ:20-07-2024 ರೊಳಗೆ ಸಲ್ಲಿಸತಕ್ಕದ್ದು.**

ಪು.ತಿ.ನೋ

**ದಾವಣಗೆರೆ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿವಾರು ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ 16 ಖಾಲಿ ಹುದ್ದೆಗಳಿಗೆ ಉಲ್ಲೇಖ (3), (4) ರಂತೆ ಲಂಬ ಮತ್ತು ಸಮತಳ ಮೀಸಲಾತಿ ನಿಗದಿಪಡಿಸಿದ ವಿವರ ಈ ಕೆಳಗಿನಂತೆ ಇದೆ.**

**1) ಶೈಕ್ಷಣಿಕ ವಿದ್ಯಾರ್ಹತೆ :**

- ದ್ವಿತೀಯ ಪದವಿ ಪೂರ್ವ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಸರ್ಟಿಫಿಕೇಷನ್ ಕೋರ್ಸ್

| ಕ್ರ.ಸಂ. | ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರದ ಹೆಸರು | ತಾಲ್ಲೂಕು | ಮೀಸಲಾತಿ ವಿವರ | | |
|---|---|---|---|---|---|
| | | | ಮೀಸಲಾತಿ ಬಿಂದು | ಲಂಬ (Vertical) | ಸಮತಳ (Horizontal) |
| 1 | ರಾಜಗೊಂಡನಹಳ್ಳಿ | ಚನ್ನಗಿರಿ | 1 | ಪ.ಜಾ | ಇತರೆ |
| 2 | ಬೇತೂರು | ದಾವಣಗೆರೆ | 2 | ಸಾ.ಅ. | ಮ.ಅ |
| 3 | ಕೊಂಡಜ್ಜಿ | ಹರಿಹರ | 3 | ಪ.ಪಂ. | ಗ್ರಾ.ಅ |
| 4 | ಹೆಬ್ಬಾಳು | ದಾವಣಗೆರೆ | 4 | ಸಾ.ಅ. | ಅಂ.ವಿ |
| 5 | ಕಬ್ಬಳ | ಚನ್ನಗಿರಿ | 5 | ಪ್ರವರ್ಗ-I | ಮ.ಅ |
| 6 | ಉಕ್ಕಡಗಾತ್ರಿ | ಹರಿಹರ | 6 | ಸಾ.ಅ. | ಗ್ರಾ.ಅ |
| 7 | ಹಳೆಬಾತಿ | ದಾವಣಗೆರೆ | 7 | ಪ್ರವರ್ಗ-II (ಎ) | ಇತರೆ |
| 8 | ಪಾಂಡೋಮಟ್ಟಿ | ಚನ್ನಗಿರಿ | 8 | ಸಾ.ಅ. | ಮ.ಅ |
| 9 | ಕಂದನಕೋವಿ | ದಾವಣಗೆರೆ | 9 | ಪ.ಜಾ. | ಗ್ರಾ.ಅ |
| 10 | ಕಕ್ಕರಗೊಳ್ಳ | ದಾವಣಗೆರೆ | 10 | ಸಾ.ಅ. | ಮಾ.ಸೈ |
| 11 | ಬನ್ನಿಕೋಡು (ಹರಿಹರ) | ಹರಿಹರ | 11 | ಪ್ರವರ್ಗ-II (ಬಿ) | ಮ.ಅ |
| 12 | ವಡೆಯರಹತ್ತೂರು | ನ್ಯಾಮತಿ | 12 | ಸಾ.ಅ. | ಮ.ಅ |
| 13 | ಓಬಣ್ಣನಹಳ್ಳಿ (ನರಗನಹಳ್ಳಿ) | ದಾವಣಗೆರೆ | 13 | ಪ್ರವರ್ಗ-II (ಎ) | ಗ್ರಾ.ಅ |
| 14 | ದೊಡ್ಡಬ್ಬಿಗೆರೆ | ಚನ್ನಗಿರಿ | 14 | ಸಾ.ಅ. | ಕ.ಮಾ.ಅ. |
| 15 | ಅಣಜಿ | ದಾವಣಗೆರೆ | 15 | ಪ.ಜಾ. | ಮ.ಅ |
| 16 | ಗುಡಾಳು | ದಾವಣಗೆರೆ | 16 | ಸಾ.ಅ. | ಗ್ರಾ.ಅ |

ಇನ್ ಲೈಬ್ರರಿ ಸೈನ್ಸ್ ಪ್ರಮಾಣ ಪತ್ರ ಪಡೆದಿರತಕ್ಕದ್ದು ಹಾಗೂ ಕನಿಷ್ಠ 03 ತಿಂಗಳು ಕಂಪ್ಯೂಟರ್ ಕೋರ್ಸನಲ್ಲಿ ಉತ್ತೀರ್ಣರಾಗಿರಬೇಕು.

- ಒಂದು ವೇಳೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಅಧಿಸೂಚಿಸಿದ ಖಾಲಿ ಹುದ್ದೆಗಳಿಗೆ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.
- ಈ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು. ವಿದ್ಯಾರ್ಹತೆಯ ದಾಖಲೆಗಳ ನೈಜತೆ ಬಗ್ಗೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ದೃಢಪಡಿಸಿಕೊಂಡ ನಂತರ ನೇಮಕಾತಿ ಆದೇಶ ನೀಡಲಾಗುವುದು.

**2) ವಾಸಸ್ಥಳ :**

ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿಯಾಗಿರತಕ್ಕದ್ದು. ಪರಂತು ಸಂಬಂಧಪಟ್ಟ ಗ್ರಾಮ ಪಂಚಾಯತಿ ವ್ಯಾಪ್ತಿಯ ನಿವಾಸಿ ಲಭ್ಯತೆ ಇಲ್ಲದೆ ಇದ್ದಲ್ಲಿ ಆಯಾ ತಾಲೂಕು ವ್ಯಾಪ್ತಿಯಲ್ಲಿನ ಹತ್ತಿರದ ಗ್ರಾಮ ಪಂಚಾಯತಿಯ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು. ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರವಾದ ತಹಶೀಲ್ದಾರರಿಂದ ವಾಸಸ್ಥಳ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.

**3) ವಯೋಮಿತಿ :**

ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ **ದಿನಾಂಕ:20-07-2024** ಕ್ಕೆ ಅಭ್ಯರ್ಥಿಯು 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಹಾಗೂ ಗರಿಷ್ಠ ವಯೋಮಿತಿಯು ಈ ಕೆಳಕಂಡಂತೆ ಇರತಕ್ಕದ್ದು.

| | | |
|---|---|---|
| ಎ | ಸಾಮಾನ್ಯ ವರ್ಗ | 18 ರಿಂದ 35 ವರ್ಷ |
| ಬಿ | 2ಎ, 2ಬಿ, 3ಎ, 3ಬಿ | 18 ರಿಂದ 38 ವರ್ಷ |
| ಸಿ | ಪ.ಜಾತಿ / ಪ.ಪಂ / ಪ್ರವರ್ಗ-1 | 18 ರಿಂದ 40 ವರ್ಷ |

**ಪು.ತಿ.ನೋ**

ಮೇಲ್ಕಂಡ ಗರಿಷ್ಠ ವಯೋಮಿತಿಯಲ್ಲದೆ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಈ ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

- **ಮಾಜಿ ಸೈನಿಕ :** ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವವೋ ಅಷ್ಟು ವರ್ಷಗಳನ್ನು ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **ವಿಧವೆಯಾಗಿದ್ದಲ್ಲಿ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆ ಎಂದು ಹಾಗೂ ಮರು ವಿವಾಹವಾಗಿರುವುದಿಲ್ಲವೆಂದು ಪ್ರಮಾಣ ಪತ್ರ ಸಲ್ಲಿಸಿದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **ಅಂಗವಿಕಲ :** ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ಅಂಗವಿಕಲ ಅಭ್ಯರ್ಥಿಯೆಂದು ಪಡೆದ ಪ್ರಮಾಣ ಪತ್ರ ಸಲ್ಲಿಸಿದಲ್ಲಿ 10 ವರ್ಷಗಳ ವಯೋಮಿತಿಯಲ್ಲಿ ಹೆಚ್ಚಿಸಲಾಗುವುದು.
- **National Cadet Corps** ಪೂರ್ಣಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ **Cadet** ಪರಿವೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.
- **ಯೋಜನಾ ನಿರಾಶ್ರಿತರು :** ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 23 ಸೇನೆನಿ 99 ದಿನಾಂಕ: 23/11/2000 ರನ್ವಯ ಯೋಜನೆಗಳಿಂದ ನಿರಾಶ್ರಿರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಕೊನೆಯ ದಿನಾಂಕದೊಳಗಾಗಿ ಪ್ರಮಾಣ ಪತ್ರವನ್ನು ಪಡೆಯುವುದು.
- **ತೃತೀಯ ಲಿಂಗ :** ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಲಗತ್ತಿಸುವುದು.
- **ಜೀತ ವಿಮುಕ್ತ :** ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಕೊನೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರವರಿಂದ ಪಡೆದು ಸಲ್ಲಿಸುವುದು.

**4) ಜನ್ಮ ದಿನಾಂಕ :**

ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ನಮೂದಿಸಿರುವ ಜನ್ಮ ದಿನಾಂಕವನ್ನು ಆಯ್ಕೆ ಪ್ರಾಧಿಕಾರವು ಪರಿಗಣಿಸುತ್ತದೆ. ಇತರೆ ಯಾವುದೇ ದಾಖಲೆಗಳನ್ನು ಪರಿಗಣಿಸುವುದಿಲ್ಲ.

**5) ಅರ್ಜಿ ಸಲ್ಲಿಸುವ ವಿಧಾನ :**

ದಾವಣಗೆರೆ ಜಿಲ್ಲೆಯ ಅಧಿಕೃತ ವೆಬ್‌ಸೈಟ್ **davanagere.nic.in** ರಲ್ಲಿ ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಅನ್‌ಲೈನ್ ಮುಖಾಂತರ ಸಲ್ಲಿಸಲು ತಿಳಿಸಿದೆ ಹಾಗೂ ಅರ್ಜಿಯನ್ನು ಸಂಪೂರ್ಣವಾಗಿ ಸಲ್ಲಿಸಿದ ನಂತರ ಪಡೆದ ಸ್ವೀಕೃತಿ ಪತ್ರದ ಪ್ರತಿಯೊಂದಿಗೆ ದಾಖಲೆಗಳನ್ನು ಲಗತ್ತಿಸಿ ಜಿಲ್ಲಾ ಪಂಚಾಯತ್ ಕಛೇರಿಯ ಆಡಳಿತ ವಿಭಾಗ ಕೊಠಡಿ ಸಂ.25 ಗೆ **ದಿನಾಂಕ:20-07-2024ರೊಳಗೆ** ಸಲ್ಲಿಸಿ, ಸ್ವೀಕೃತಿ ಪಡೆಯುವುದು.

**6) ಅರ್ಜಿ ಶುಲ್ಕ :**

| | |
|---|---|
| ಸಾಮಾನ್ಯ ಅಭ್ಯರ್ಥಿಗಳಿಗೆ | ರೂ.500 |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1 ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ.200 |
| ಎಲ್ಲಾ ವಿಧಗಳ ವಿಕಲಚೇತನ / ಅಂಗವಿಕಲ ಅಭ್ಯರ್ಥಿಗಳಿಗೆ | ರೂ.100 |

**ಅರ್ಜಿ ಶುಲ್ಕ ಪಾವತಿಸುವ ವಿಧಾನ:**

ಮೇಲ್ಕಂಡ ಕೆಟಗರಿಗೆ ಅನುಗುಣವಾಗಿ ನಿಗದಿಪಡಿಸಿದ ಅರ್ಜಿ ಶುಲ್ಕವನ್ನು ಈ ಕೆಳಗೆ ನೀಡಿರುವ QR Scan Code ಮೂಲಕ ಪಾವತಿಸಬಹುದಾಗಿದೆ.

ಪು.ತಿ.ನೋ

ಶುಲ್ಕ ಪಾವತಿಸಿದ ಬಗ್ಗೆ ಶುಲ್ಕ ಪಾವತಿ ಲಿಂಕ್‌ನಲ್ಲಿ ಮುದ್ರಿಸಿ (Print Option ನಲ್ಲಿ) ಚಲನ್ ಪ್ರಿಂಟ್ ತೆಗೆದುಕೊಂಡು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಅಪ್ಲೋಡ್ ಮಾಡುವುದು.

| ಕ್ರ.ಸಂ | ಖಾತೆದಾರರ ಹೆಸರು | ಬ್ಯಾಂಕ್ ಹೆಸರು | ಖಾತೆ ನಂಬರ್ | IFSC Code | MICR Code |
|---|---|---|---|---|---|
| 1 | Chief Account Officer, Zilla Panchayath Davangere | SBI | 54042043217 | SBIN0040108 | 577002009 |

**7) ಜಾತಿ ಮೀಸಲಾತಿ ಪ್ರಮಾಣ ಪತ್ರ :**

ನಿಗದಿತ ನಮೂನೆಯಲ್ಲಿ ಜಾತಿ ಪ್ರಮಾಣ ಪತ್ರವನ್ನು ತಹಶೀಲ್ದಾರರಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗಡೆ ಪಡೆದಿರಬೇಕು.

**8) ಆಯ್ಕೆ ವಿಧಾನ :**

- ಶೈಕ್ಷಣಿಕ ಅರ್ಹತೆಯಲ್ಲಿನ ಮೆರಿಟ್ ಮತ್ತು ರೋಸ್ಟರ್ ಮೀಸಲಾತಿ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಒಂದು ವೇಳೆ ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಸಮಾನವಾದ ಅಂಕಗಳನ್ನು / ಮೆರಿಟ್‌ನ್ನು ಹೊಂದಿದಲ್ಲಿ ವಯಸ್ಸಿನಲ್ಲಿ ಹಿರಿಯರಾದವರನ್ನು ಆಯ್ಕೆಗೆ ಪರಿಗಣಿಸಲಾಗುವುದು.
- ಹುದ್ದೆಗೆ ಸಂಬಂಧಿಸಿದಂತೆ ಸರ್ಟಿಫಿಕೇಷನ್ ಕೋರ್ಸ್ ಇನ್ ಲೈಬ್ರರಿ ಸೈನ್ಸ್ ಪದವಿ ಪಡೆದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸದಿದ್ದಲ್ಲಿ ಪಿ.ಯು.ಸಿ. ಪರೀಕ್ಷೆಯಲ್ಲಿ ಅಭ್ಯರ್ಥಿಯು ಗಳಿಸಿದ ಅಂಕಗಳನ್ನು ಆಧರಿಸಿ ಮೀಸಲಾತಿ ಬಿಂದುವಿನಂತೆ ಆಯ್ಕೆಗೆ ಪರಿಗಣಿಸಲಾಗುವುದು.
- ಗ್ರಾಮ ಪಂಚಾಯತಿವಾರು ಬಂದಿರುವ ಅರ್ಜಿಗಳನ್ನು ಮೆರಿಟ್ ಆಧಾರದ ಮೇಲೆ ಖಾಲಿ ಹುದ್ದೆಗಳಿಗೆ (ರೋಸ್ಟರ್ ಬಿಂದುವಿನಂತೆ) ಸಮನಾಗಿ ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರವಾರು ಆಯ್ಕೆ ಪಟ್ಟಿಯನ್ನು ತಯಾರಿಸಲಾಗುವುದು.

**9) ಸರ್ಕಾರದ ಆದೇಶ ಸಂಖ್ಯೆ: RDPR 425 ಜಿಪಅ 2023 ದಿ:16-08-2023** ರಂತೆ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಪ್ರತಿ ಮಾಹೆ ಮಾಸಿಕ ಕನಿಷ್ಠ ವೇತನ ರೂ.15196.72 ಹಾಗೂ ಕನಿಷ್ಠ ವೇತನದ ಜೊತೆಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸುವ ಅನ್ವಯವಾಗುವ ತುಟ್ಟಿ ಭತ್ಯೆಯನ್ನು (VDA) ಪಾವತಿಸಲಾಗುವುದು.

**ಸಾಮಾನ್ಯ ಸೂಚನೆಗಳು :**

- ಅಭ್ಯರ್ಥಿಯು ತನ್ನ ಇತ್ತೀಚಿನ 2 ಪಾಸ್ ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಲಗತ್ತಿಸಬೇಕು.
- ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಪತ್ರಾಂಕಿತ ಅಧಿಕಾರಿಯ ದೃಢೀಕರಣದೊಂದಿಗೆ ದ್ವಿ-ಪ್ರತಿಯಲ್ಲಿ ಸಲ್ಲಿಸುವುದು.
- ಕನಿಷ್ಠ 3 ತಿಂಗಳ ತರಬೇತಿ ಹೊಂದಿದ ಗಣಕಯಂತ್ರ ಪ್ರಮಾಣ ಪತ್ರ ಸಲ್ಲಿಸುವುದು (KEONICS ಸಂಸ್ಥೆ ಮೂಲಕ)
- ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದು ಕಂಡುಬಂದಿದ್ದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ಅರ್ಜಿಯಲ್ಲಿ ತಪ್ಪು / ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
- ಅರ್ಜಿಯಲ್ಲಿ ನೀಡುವ ವಿಳಾಸ ಮತ್ತು ಮೊಬೈಲ್ ಸಂಖ್ಯೆಯೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
- ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ
- ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಯಾವುದೇ ಹಕ್ಕು ದೊರೆಯುವುದಿಲ್ಲ.
- ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಸಂದರ್ಭದಲ್ಲಿ ಮುಂದೂಡುವ, ರದ್ದುಗೊಳಿಸುವ ಮತ್ತು ನಿರ್ಬಂಧನೆಗಳನ್ನು ಬದಲಾಯಿಸುವ ಅಧಿಕಾರವನ್ನು ನೇಮಕಾತಿ ಪ್ರಾಧಿಕಾರ ಹೊಂದಿರುತ್ತದೆ.
- ಈಗಾಗಲೇ ಪುರುಷ ಮತ್ತು ಮಹಿಳಾ ವ್ಯಕ್ತಿಯು ಎರಡನೆಯ ಮದುವೆಯಾಗಿದ್ದರೆ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿಯನ್ನು ಪಡೆಯದಿದ್ದರೆ ಅಂತಹವರು ನೇಮಕಾತಿಗೆ ಅರ್ಹರಾಗುವುದಿಲ್ಲ.
- ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವನ್ನು ಅರ್ಜಿ ಸ್ವೀಕರಿಸಲು ಕೊನೆ ದಿನಾಂಕವೆಂದು ಪರಿಗಣಿಸಲಾಗುವುದು.

| ಅರ್ಜಿಗಳನ್ನು ಸಲ್ಲಿಸಲು ಪ್ರಾರಂಭ ದಿನಾಂಕ | ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ |
|---|---|
| 29-06-2024 | 20-07-2024 |

ಪು.ತಿ.ನೋ

- ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾಗುವ ಅಭ್ಯರ್ಥಿಗಳಿಗೆ ಅಂಚೆ ಹಾಗೂ ಕಛೇರಿ ದೂರವಾಣಿ ಮೂಲಕ ಮಾಹಿತಿ ನೀಡಲಾಗುವುದು. ಕಡ್ಡಾಯವಾಗಿ ಅರ್ಜಿಯಲ್ಲಿ ನಮೂದಿಸಿದ ಎಲ್ಲಾ ಮೂಲ ದಾಖಲೆಗಳನ್ನು ಸಲ್ಲಿಸತಕ್ಕದ್ದು.
- ನಿಗದಿಪಡಿಸಿದ ದಿನಾಂಕದಂದು ದಾಖಲೆಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳು ಅನರ್ಹಗೊಳ್ಳುತ್ತಾರೆ ಹಾಗೂ ಅವರ ಹೆಸರನ್ನು ನೇಮಕಾತಿ ಪ್ರಕ್ರಿಯೆಯಿಂದ ಕೈಬಿಡಲಾಗುವುದು.
- ಅರ್ಜಿಯಲ್ಲಿ ಕೇಳಿರುವ ಪೂರ್ಣ ಮಾಹಿತಿಯನ್ನು ಭರ್ತಿ ಮಾಡಿಲ್ಲದೇ ಇರುವ ಅಭ್ಯರ್ಥಿಗಳ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೇ ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳಿಗೆ ಕನ್ನಡ ಭಾಷೆ ಓದಲು, ಬರೆಯಲು ಮತ್ತು ಅರ್ಥ ಮಾಡಿಕೊಳ್ಳುವ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ. ಹಾಗೂ ಸರ್ಕಾರಿ ನಿಯಮಾನುಸಾರ ಕಡ್ಡಾಯ ಕನ್ನಡ ಭಾಷಾ ಪರೀಕ್ಷೆ ತೇರ್ಗಡೆಯಾಗುವುದು.
- **ಮಾಜಿ ಸೈನಿಕರಾಗಿದ್ದಲ್ಲಿ ಪ್ರಮಾಣ ಪತ್ರ (ಗರಿಷ್ಠ 10 ವರ್ಷಗಳ ವಯೋಮಿತಿ ಸಡಿಲಿಕೆ ಇರುತ್ತದೆ)**
- **ಅಭ್ಯರ್ಥಿಗಳ ಮೂಲದಾಖಲೆಗಳ ಪರಿಶೀಲನಾ ನಂತರ ಆದೇಶ ನೀಡಲಾಗುವುದು.**
- ಹೆಚ್ಚಿನ ವಿವರಗಳಿಗಾಗಿ ವೆಬ್‌ಸೈಟ್ **davanagere.nic.in** ರಲ್ಲಿನ ಮಾಹಿತಿ ಸೂಚಿಯಲ್ಲಿ ಲಭ್ಯವಿರುತ್ತದೆ ಮತ್ತು ಸ್ಪಷ್ಟೀಕರಣ ಅವಶ್ಯವಿದ್ದಲ್ಲಿ ಸಹಾಯವಾಣಿ ಸಂಖ್ಯೆ: 08192-226655 ಗೆ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
- ಅರ್ಜಿದಾರರು ಮೀಸಲಾತಿಗೆ ಸಂಬಂಧಪಟ್ಟ ಎಲ್ಲಾ ದಾಖಲೆಗಳನ್ನು ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕದೊಳಗಾಗಿ ಪಡೆದಿರತಕ್ಕದ್ದು.

**ವಿಶೇಷ ಸೂಚನೆ:-**

1. **ಕ್ರಮ ಸಂಖ್ಯೆ 01 ರಾಜಗೊಂಡನಹಳ್ಳಿ ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಸಂಬಂಧಿಸಿದ ನೇಮಕಾತಿಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ WP 17804/2023 (LB-RES) ರಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.**
2. **ಕ್ರಮ ಸಂಖ್ಯೆ 03 ಕೊಂಡಜ್ಜಿ ಗ್ರಾಮ ಪಂಚಾಯತಿಯ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಸಂಬಂಧಿಸಿದ ನೇಮಕಾತಿಯು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ WP 7589/2024 (S-RES) ರಲ್ಲಿ ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.**

27/6/24

**ಉಪ ಕಾರ್ಯದರ್ಶಿ(ಆಡಳಿತ) ಹಾಗೂ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ನೇಮಕಾತಿ ಸಮಿತಿ ಸದಸ್ಯ ಕಾರ್ಯದರ್ಶಿ,**
**ಜಿಲ್ಲಾ ಪಂಚಾಯತ್, ದಾವಣಗೆರೆ.**

**ಪ್ರತಿಯನ್ನು :**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2) ಜಿಲ್ಲಾ ಸೂಚನಾ ವಿಜ್ಞಾನಾಧಿಕಾರಿ, ದಾವಣಗೆರೆ ಜಿಲ್ಲೆ ಇವರಿಗೆ **davanagere.nic.in** ರ ವೆಬ್ ಸೈಟ್ ನಲ್ಲಿ ಪ್ರಕಟಿಸುವುದು.
3) ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯತ್, ದಾವಣಗೆರೆ/ಹರಿಹರ/ನ್ಯಾಮತಿ /ಚನ್ನಗಿರಿ ಇವರಿಗೆ ಮಾಹಿತಿಗಾಗಿ ಕಳುಹಿಸುತ್ತಾ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸುವುದು.
4) ಸಂಬಂಧಿಸಿದ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಳುಹಿಸುತ್ತಾ, ಸದರಿ ನೇಮಕಾತಿ ಬಗ್ಗೆ ಗ್ರಾ.ಪಂ. ಕಾರ್ಯಾಲಯದ ಸೂಚನಾ ಫಲಕಕ್ಕೆ ಲಗತ್ತಿಸುವುದು ಹಾಗೂ ಗ್ರಾಮದಲ್ಲಿ ಸ್ವಚ್ಛ ವಾಹಿನಿ ಮುಖಾಂತರ ಸಾರುವುದು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಮಾಹಿತಿ ಲಭ್ಯವಾಗುವಂತೆ ವ್ಯಾಪಕ ಪ್ರಚಾರ ಮಾಡುವುದು.
5) ಕಛೇರಿ ಪ್ರತಿ.